# Bangalore
# Regional News
# 11.11.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ದೆಹಲಿ ಬಾಂಬ್ ಸ್ಫೋಟ ಪ್ರಕರಣ ; ರಾಜ್ಯದ ಗಡಿಭಾಗ, ಪ್ರವಾಸಿ ಸ್ಥಳಗಳಲ್ಲಿ ಬಿಗಿ ಭದ್ರತೆ
2. ರಾಜ್ಯದ 5 ಕಡೆ ವಿಶ್ವದರ್ಜೆಯ ಏರೋಸ್ಪೇಸ್, ರಕ್ಷಣಾ ಪಾರ್ಕ್ ಸ್ಥಾಪನೆ – ಮುಖ್ಯಮಂತ್ರಿ ಸಿದ್ದರಾಮಯ್ಯ
3. ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಲಾಲೋಕ ಮಳಿಗೆ ಅನಾವರಣ
4. ಜೈಲಿನಲ್ಲಿ ಭಯೋತ್ಪಾದಕ ಮೊಬೈಲ್ ಬಳಸಿದ ಪ್ರಕರಣ ; ಎನ್‌ಐಎ ತನಿಖೆಗೆ ವಹಿಸುವಂತೆ ಬಿಜೆಪಿ ಆಗ್ರಹ
5. ಕರ್ನಾಟಕ–ಮಹಾರಾಷ್ಟ್ರ ನಡುವಿನ ರಣಜಿ ಪಂದ್ಯ ಡ್ರಾನಲ್ಲಿ ಅಂತ್ಯ

***************

ದೆಹಲಿ ಬಾಂಬ್ ಸ್ಫೋಟದ ಹಿನ್ನೆಲೆಯಲ್ಲಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ವಿಧಾನಸೌಧ, ರಾಜಭವನ, ಸೇರಿದಂತೆ ರಾಜ್ಯದ ವಿವಿಧೆಡೆ ಬಿಗಿ ಭದ್ರತೆ ಒದಗಿಸಲಾಗಿದೆ.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಕಟಣೆ ಹೊರಡಿಸಿದ್ದು, ಪ್ರಯಾಣಿಕರಿಗೆ ವಿಶೇಷ ಸೂಚನೆ ನೀಡಿದೆ. ಪ್ರಯಾಣಿಕರು ಅವಧಿಗೆ ಮುಂಚಿತವಾಗಿ ಆಗಮಿಸುವಂತೆ ಮನವಿ ಮಾಡಿದೆ. ತೀವ್ರ ತಪಾಸಣೆ ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆ ಭದ್ರತಾ ಪರಿಶೀಲನೆ ವಿಳಂಬವಾಗಲಿದೆ ಎಂದು ತಿಳಿಸಿದೆ.

ವಾಣಿಜ್ಯ ನಗರಿ ದಾವಣಗೆರೆ ಜಿಲ್ಲೆಯಾದ್ಯಂತ ಭದ್ರತೆ ಬಿಗಿಗೊಳಿಸಲಾಗಿದ್ದು, ಅನುಮಾನಾಸ್ಪದ ವ್ಯಕ್ತಿಗಳ ಮೇಲೆ ನಿಗಾವಹಿಸಲು 18 ಚೆಕ್ ಪೋಸ್ಟ್ ಗಳನ್ನು ಸ್ಥಾಪಿಸಲಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಅನುಮಾನಾಸ್ಪದ ವಸ್ತುಗಳು ಕಂಡು ಬಂದರೆ ಪೊಲೀಸ್ ಸಹಾಯವಾಣಿ 112 ಗೆ ಮಾಹಿತಿ ನೀಡಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದ್ದಾರೆ.

ಧ್ವನಿ : ಉಮಾಪ್ರಶಾಂತ್

ಚಿಕ್ಕಮಗಳೂರಿನಲ್ಲಿ ಪೊಲೀಸ್ ಇಲಾಖೆ ಕಟ್ಟೆಚ್ಚರ ವಹಿಸಿದೆ. ದಕ್ಷಿಣ ಕನ್ನಡ–ಚಿಕ್ಕಮಗಳೂರು ಸಂಪರ್ಕಿಸುವ ಕೊಟ್ಟಿಗೆಹಾರ, ಮುಳ್ಳಯ್ಯನಗಿರಿ ರಸ್ತೆ ಸೇರಿ ಜಿಲ್ಲೆಯ ಗಡಿ ಭಾಗ, ಪ್ರವಾಸಿ ತಾಣಗಳಲ್ಲಿ ಕೆಲವೆಡೆ ಪೊಲೀಸ್ ಬ್ಯಾರಿಕೇಡ್‌ಗಳನ್ನು ಹಾಕಿ ವಾಹನಗಳ ತಪಾಸಣೆ ಕೈಗೊಳ್ಳಲಾಗಿದೆ.

ಹಾಸನ ಜಿಲ್ಲೆಯಾದ್ಯಂತ ಪೊಲೀಸ್ ಇಲಾಖೆ ಕಟ್ಟೆಚ್ಚರ ವಹಿಸಿದ್ದು, ರೈಲು ನಿಲ್ದಾಣ ಪ್ರಮುಖ ದೇವಾಲಯ ಹಾಗೂ ಪ್ರವಾಸಿ ಸ್ಥಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದೆ. ಹೊರ ಜಿಲ್ಲೆ ಹೊರ ರಾಜ್ಯಗಳಿಂದ ಬರುತ್ತಿರುವ ವಾಹನಗಳನ್ನು ತೀವ್ರ ತಪಾಸಣೆಗೆ ಒಳಪಡಿಸಲಾಗುತ್ತಿದೆ.

***************

ದೆಹಲಿ ಕಾರ್ ಬಾಂಬ್ ಸ್ಫೋಟ ಪ್ರಕರಣದ ತನಿಖೆಯನ್ನು ಕೇಂದ್ರ ಗೃಹ ಸಚಿವಾಲಯ ಎನ್‌ಐಎಗೆ ಹಸ್ತಾಂತರಿಸಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ನಡೆದ ಸಭೆಯ ಬಳಿಕ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಬಾಂಬ್ ಸ್ಫೋಟ ಪ್ರಕರಣವನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಖಂಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಭದ್ರತೆ ಬಗ್ಗೆ ಗೃಹ ಸಚಿವರು ಪರಿಶೀಲನೆ ನಡೆಸುತ್ತಿದ್ದಾರೆ. ಭದ್ರತೆ ಹೆಚ್ಚಳದ ಬಗ್ಗೆ ಮುಖ್ಯಮಂತ್ರಿಯವರು ಈಗಾಗಲೇ ಆದೇಶ ನೀಡಿದ್ದಾರೆ. ಈ ಪ್ರಕರಣವನ್ನು ಕಾಂಗ್ರೆಸ್ ಖಂಡಿಸುತ್ತಿದೆ ಎಂದು ತಿಳಿಸಿದ್ದಾರೆ. ಇದೆ ವೇಳೆ ಗುಪ್ತಚರ ಇಲಾಖೆ ವೈಫಲ್ಯದಿಂದ ಸ್ಫೋಟ ಸಂಭವಿಸಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಆರೋಪ ಮಾಡುವ ಸಮಯ ಇದಲ್ಲ ಎಂದು ಹೇಳಿದ್ದಾರೆ.

ಇನ್ನೊಂದೆಡೆ ಹಾಸನದಲ್ಲಿ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸ್ಫೋಟ ಪ್ರಕರಣದ ಬಗ್ಗೆ ಸಮಗ್ರ ತನಿಖೆಗೆ ಒತ್ತಾಯಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಕಾಲಿನ್ಸ್ ಏರೋಸ್ಪೇಸ್ ಇಂಡಿಯಾ ಕಾರ್ಯಾಚರಣೆ ಕೇಂದ್ರವನ್ನು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, 26 ಎಕರೆ ಕ್ಯಾಂಪಸ್‌ನಲ್ಲಿ ಸ್ಥಾಪಿಸಲಾದ ಈ ಅತ್ಯಾಧುನಿಕ ಸೌಲಭ್ಯವುಳ್ಳ ಏರೋಸ್ಪೇಸ್ ಕೇಂದ್ರವು ಉತ್ಪಾದನಾ ಉದ್ಯಮಕ್ಕೆ ಜಾಗತಿಕ ಕೇಂದ್ರವಾಗಿ ಕರ್ನಾಟಕದ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲು ಸಾಧಿಸಲಿದೆ ಎಂದು ತಿಳಿಸಿದ್ದಾರೆ.

ಬೆಂಗಳೂರು, ಬೆಳಗಾವಿ, ಮೈಸೂರು, ತುಮಕೂರು ಮತ್ತು ಚಾಮರಾಜನಗರದಲ್ಲಿ 5 ವಿಶ್ವದರ್ಜೆಯ ಏರೋಸ್ಪೇಸ್, ರಕ್ಷಣಾ ಪಾರ್ಕ್ ಅಭಿವೃದ್ಧಿಪಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಸಿಎಂ

***************

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಎರಡನೇ ಟರ್ಮಿನಲ್‌ನಲ್ಲಿ ಕೈಗಾರಿಕಾ ಇಲಾಖೆಯ ಮೂಲಕ ನಿರ್ಮಿಸಿರುವ ಕಲಾಲೋಕ ಮಳಿಗೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಿತ್ರಕಲಾ ರಚನೆ ಮತ್ತು ಘಂಟಾನಾದದ ಮೂಲಕ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನವು ಜನನಿಬಿಡತೆಯಲ್ಲಿ ದೇಶದಲ್ಲೇ ಮೂರನೇ ಸ್ಥಾನದಲ್ಲಿದೆ. ದೇಶ ವಿದೇಶಗಳ ಪ್ರಯಾಣಿಕರಿಗೆ ಕರ್ನಾಟಕದ ಅಭಿಮಾನದ ಪಯಣ ಅರ್ಥವಾಗಬೇಕು ಎನ್ನುವ ಉದ್ದೇಶದಿಂದ ಕಲಾಲೋಕ ಮಳಿಗೆ ನಿರ್ಮಿಸಲಾಗಿದೆ. ಇದರ ಮೂಲಕ ಕರ್ನಾಟಕದ ಹೆಮ್ಮೆಯ ಉತ್ಪನ್ನಗಳಿಗೆ ಜಾಗತಿಕ ಮಟ್ಟದಲ್ಲಿ ವ್ಯಾಪಕ ಪ್ರಚಾರ, ಬ್ರ್ಯಾಂಡಿಂಗ್ ಮತ್ತು ಮಾರಾಟ ಸಾಧಿಸಲಾಗುವುದು ಎಂದು ಹೇಳಿದ್ದಾರೆ.

ಸಚಿವ ಎಂ.ಬಿ.ಪಾಟೀಲ್ ಮಾತನಾಡಿ, 'ಟರ್ಮಿನಲ್-2ರ ಸಮೀಪ ನಿರ್ಮಿತವಾಗಿರುವ ಕಲಾಲೋಕ ಮಳಿಗೆಯಲ್ಲಿ ರಾಜ್ಯದ ಪಾರಂಪರಿಕ ಉತ್ಪನ್ನಗಳಾದ ಮೈಸೂರು ಸ್ಯಾಂಡಲ್ ಸೋಪ್, ಗಂಧದ ಎಣ್ಣೆ, ಅಗರಬತ್ತಿ, ಮೈಸೂರು ಸಿಲ್ಕ್, ಚನ್ನಪಟ್ಟಣದ ಬೊಂಬೆ, ಲಿಡ್ಕರ್ ಉತ್ಪನ್ನಗಳು, ಬಗೆಬಗೆಯ ಪರಿಮಳವಿರುವ ಕಾಫಿಪುಡಿ, ಕೈಮಗ್ಗದ ಉತ್ಪನ್ನಗಳು ದೊರೆಯಲಿದೆ ಎಂದು ತಿಳಿಸಿದ್ದಾರೆ.

ಕೆ.ಎಸ್.ಡಿ.ಎಲ್, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಯಮಿತ, ಕೆಎಸ್‌ಐಸಿ, ಕಾಫಿ ಬೋರ್ಡ್ ಮತ್ತು ಲಿಡ್ಕರ್ ಮುಂತಾದ ಉದ್ದಿಮೆಗಳು ಇದಕ್ಕೆ ಕೈಜೋಡಿಸಿವೆ.

***************

ಅಸಂಘಟಿತ ಕಾರ್ಮಿಕರಿಗಾಗಿ ಕಾರ್ಮಿಕ ಇಲಾಖೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಪ್ರತಿ ಜಿಲ್ಲೆಗಳಲ್ಲಿ ಕಾರ್ಮಿಕರಿಗೆ ಅರಿವು ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿನ ಪ್ರತಿಯೊಬ್ಬ ಕಾರ್ಮಿಕರು ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

101 ಅಸಂಘಟಿತ ಕಸುಬು ಮಾಡುವ ಕಾರ್ಮಿಕರನ್ನು ಅಸಂಘಟಿತ ಕಾರ್ಮಿಕರೆಂದು ಪರಿಗಣಿಸಿ ಲಕ್ಷಾಂತರ ಜನರಿಗೆ ಕಾರ್ಮಿಕ ಕಾರ್ಡ್ ವಿತರಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಕೃಷಿ ಕಾರ್ಮಿಕರನ್ನು ಅಸಂಘಟಿತ ಕಾರ್ಮಿಕರೆಂದು ಪರಿಗಣಿಸಲಾಗುವುದು ಎಂದು ಹೇಳಿದ್ದಾರೆ.

***************

ಪರಪ್ಪನ ಅಗ್ರಹಾರ ಜೈಲಿನಲ್ಲಿ ಭಯೋತ್ಪಾದಕ ಮೊಬೈಲ್ ಬಳಸಿದ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವದೆಹಲಿಯಲ್ಲಿ ನಡೆದ ಘಟನೆ ಭಯೋತ್ಪಾದನಾ ಕೃತ್ಯ ಎಂಬ ಅನುಮಾನವಿದೆ. ಇದೇ ಸಮಯದಲ್ಲಿ ಪರಪ್ಪನ ಅಗ್ರಹಾರ ಜೈಲಿನಲ್ಲಿ ಒಬ್ಬ ಭಯೋತ್ಪಾದಕ ಮೊಬೈಲ್ ಬಳಸಿರುವ ಘಟನೆ ಬೆಳಕಿಗೆ ಬಂದಿದೆ.

ಈ ಬಗ್ಗೆ ಹೆಚ್ಚು ತನಿಖೆ ಮಾಡಿದರೆ ಹೊಸ ವಿಚಾರಗಳು ತಿಳಿಯಲಿದೆ. ಇದು ದೇಶದ ಭದ್ರತೆಗೆ ಸಂಬಂಧಿಸಿದ ವಿಷಯವಾಗಿರುವುದರಿಂದ ಇದನ್ನು ಎನ್‌ಐಎ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಸರ್ಕಾರ ಐಸಿಯುನಲ್ಲಿದೆ ಎಂದು ಅವರು ಆರೋಪಿಸಿದ್ದಾರೆ.

***************

ಇಂದು ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಆಚರಿಸಲಾಗುತ್ತಿದೆ.

ವೀರ ವನಿತೆ ಒನಕೆ ಓಬವ್ವ ಮಹಿಳೆಯ ಆತ್ಮಸ್ಥೈರ್ಯದ ಪ್ರತೀಕವಾಗಿ ಎಲ್ಲಾ ಮಹಿಳೆಯರಿಗೆ ಸ್ಫೂರ್ತಿಯಾಗಿದ್ದಾರೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ.

ಧೈರ್ಯ, ದೇಶಭಕ್ತಿ ಮತ್ತು ಸ್ತ್ರೀಶಕ್ತಿಯ ಪ್ರತೀಕವಾದ ವೀರವನಿತೆ ಒನಕೆ ಓಬವ್ವ ಅವರ ತ್ಯಾಗ ಮತ್ತು ಸಾಹಸವನ್ನು ಪ್ರತಿಯೊಬ್ಬರೂ ನೆನಪಿಸಿಕೊಳ್ಳಬೇಕು ಎಂದು ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಅಭಿಪ್ರಾಯಪಟ್ಟಿದ್ದಾರೆ.

ಒನಕೆ ಓಬವ್ವ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೊಪ್ಪಳ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ವೀರವನಿತೆ ಒನಕೆ ಓಬವ್ವ ಅವರ ಜಯಂತ್ಯುತ್ಸವ ಕಾರ್ಯಕ್ರಮ ಜರುಗಿತು. ಗದಗ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ವೀರ ವನಿತೆ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಲ್ಲಿಸಿದರು.

***************

ಪುಣೆಯಲ್ಲಿ ನಡೆದ ಎಲೈಟ್ ಬಿ ಗುಂಪಿನ ರಣಜಿ ಪಂದ್ಯಾವಳಿಯಲ್ಲಿ ಮಹಾರಾಷ್ಟ್ರ ಹಾಗೂ ಕರ್ನಾಟಕ ನಡುವಿನ ಪಂದ್ಯ ಡ್ರಾ ಆಗಿದೆ.

ಮೊದಲ ಇನ್ನಿಂಗ್ಸ್‌ನಲ್ಲಿ 13 ರನ್‌ಗಳ ಮುನ್ನಡೆ ಸಾಧಿಸಿದ್ದ ಮಯಾಂಕ್ ಅಗರ್ವಾಲ್ ನೇತೃತ್ವದ ತಂಡ 3 ಅಂಕ ಗಳಿಸಿದೆ. ಬೌಲಿಂಗ್ ಹಾಗೂ ಬ್ಯಾಟಿಂಗ್ 2ರಲ್ಲೂ ಮಿಂಚಿದ ಅಲ್‌ರೌಂಡರ್ ಶ್ರೇಯಸ್ ಗೋಪಾಲ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಕರ್ನಾಟಕ ಮೊದಲ ಇನ್ನಿಂಗ್ಸ್‌ನಲ್ಲಿ 313 ಹಾಗೂ 310 ರನ್ ಗಳಿಸಿದೆ. ಮಹಾರಾಷ್ಟ್ರ ಮೊದಲ ಇನ್ನಿಂಗ್ಸ್‌ನಲ್ಲಿ 300 ರನ್ ಗಳಿಸಿದೆ.

*******ಮುಕ್ತಾಯ*******